# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಿಲ್ಲಾ ಜಲಾನಯನ ಅಭಿವೃದ್ಧಿ ಇಲಾಖೆ, ಚಿಕ್ಕಮಗಳೂರು ಜಿಲ್ಲೆ ಕೊಪ್ಪ ತಾಲ್ಲೂಕಿನಲ್ಲಿ ಕೈಗೊಂಡ ಕಾಮಗಾರಿಗಳು ಕಳಪೆಯಾಗಿವೆ ಎಂಬ ಬಗ್ಗೆ ತನಿಖೆ ನಡೆಸಲು ಲೋಕಾಯುಕ್ತರಿಗೆ ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:-**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ:ಜಿಪಂಚಿ:ಅ-2/ಗ್ರಾಅಕಾ/31/2012-13 ದಿನಾಂಕ: 20-11-2012.
2. ಸರ್ಕಾರದ ಪತ್ರ ಸಂಖ್ಯೆ:ಕೃಇ/81/ಕೃಪವಿ/2012 ದಿನಾಂಕ:29-08-2013.
3. ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ:ಉಪಲೋಕ್/ಪಿಎಸ್-2/2013 ದಿನಾಂಕ: 21-09-2013.

**ಪ್ರಸ್ತಾವನೆ:-**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರು ಜಿಲ್ಲಾ ಪಂಚಾಯತಿ ಸರ್ವಸದಸ್ಯರ ಸಭೆಯ ತೀರ್ಮಾನದಂತೆ, ಜಿಲ್ಲಾ ಪಂಚಾಯತಿಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿಯು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನ ಅತ್ತಿಕೊಡಿಗೆ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಅನುಷ್ಠಾನವಾಗಿರುವ ಕಾಮಗಾರಿಗಳನ್ನು ಹಾಗೂ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ ಸಲ್ಲಿಸಿರುವ ವರದಿಯಂತೆ ಜಲಾನಯನ ಅಭಿವೃದ್ಧಿ ಇಲಾಖೆಯ ವತಿಯಿಂದ ಕೊಪ್ಪ ತಾಲ್ಲೂಕಿನಲ್ಲಿ ಕೈಗೊಂಡ ಕಾಮಗಾರಿಗಳಲ್ಲಿ ಸಾಕಷ್ಟು ನ್ಯೂನತೆಗಳು ಕಂಡು ಬಂದಿರುವುದರಿಂದ ಸದರಿ ಜಿಲ್ಲೆಯ ಕೊಪ್ಪ ತಾಲ್ಲೂಕಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ವತಿಯಿಂದ ಕಳೆದ 5 ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಅನುಷ್ಠಾನಗೊಳಿಸಿದ ಕಾಮಗಾರಿಗಳ ಬಗ್ಗೆ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಿಂದ ತನಿಖೆ ನಡೆಸಲು ಮೇಲೆ ಕ್ರಮಾಂಕ(1)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಕ್ರಮಾಂಕ(2)ರಲ್ಲಿ ಓದಲಾದ ಪತ್ರದಲ್ಲಿ ಚಿಕ್ಕಮಗಳೂರು ಜಿಲ್ಲೆ ಕೊಪ್ಪ ತಾಲೂಕಿನ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಕೈಗೊಂಡ ಕಾಮಗಾರಿಗಳಲ್ಲಿನ ಅವ್ಯವಹಾರದ ತನಿಖೆಗಾಗಿ ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತ ಅಧಿನಿಯಮ 7(2) ರಡಿಯಲ್ಲಿ ಹೆಚ್ಚಿನ ತನಿಖೆಗಾಗಿ ಗೌರವಾನ್ವಿತ ಉಪ ಲೋಕಾಯುಕ್ತರಿಗೆ ವಹಿಸಲಾಗಿತ್ತು.

ಆದರೆ ಉಪ ಲೋಕಾಯುಕ್ತರು ಮೇಲೆ ಕ್ರಮಾಂಕ(3)ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 7(2)(ಎ)ರಡಿಯಲ್ಲಿ ಗೌರವಾನ್ವಿತ ಲೋಕಾಯುಕ್ತರಿಗೆ ತನಿಖೆಯನ್ನು ವಹಿಸಲು ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರ ಕೋರಿಕೆಯನ್ನು ಪರಿಶೀಲಿಸಿದ್ದು, ಚಿಕ್ಕಮಗಳೂರು ಜಿಲ್ಲೆ ಕೊಪ್ಪ ತಾಲೂಕಿನ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಕೈಗೊಂಡ ಕಾಮಗಾರಿಗಳಲ್ಲಿ ಅವ್ಯವಹಾರವು ನಡೆದಿರುವುದೆಂದು ಮೇಲು ನೋಟಕ್ಕೆ (prima-facie) ಕಂಡು ಬಂದಿದ್ದರಿಂದ, ಸದರಿ ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 7(2)(ಎ) ರಡಿಯಲ್ಲಿ ವಿವರವಾದ ತನಿಖೆ ನಡೆಸಲು ಮಾನ್ಯ ಗೌರವಾನ್ವಿತ ಉಪ-ಲೋಕಾಯುಕ್ತರವರಿಗೆ ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 81 ಕೃಪವಿ 2012.**

**ಬೆಂಗಳೂರು, ದಿನಾಂಕ:23-10-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಚಿಕ್ಕಮಗಳೂರು ಜಿಲ್ಲೆ ಕೊಪ್ಪ ತಾಲೂಕಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಕಳೆದ 5 ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳಲ್ಲಿ ಅವ್ಯವಹಾರವು ನಡೆದಿರುವುದೆಂದು ತಿಳಿದು ಬಂದ ಹಿನ್ನೆಲೆಯಲ್ಲಿ ಸದರಿ ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 7(2)(ಎ) ರಡಿಯಲ್ಲಿ ತನಿಖೆ ನಡೆಸಲು, ಪ್ರಕರಣವನ್ನು ಗೌರವಾನ್ವಿತ ಉಪ-ಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:-**

1. ~~ಅಕೌಂಟ್ಸ್ ಆಫೀಸರ್, ಜಿಇ-5, ಮಹಾಲೇಖಪಾಲರ ಕಛೇರಿ,. (ಲೆಕ್ಕ ಪತ್ರ ಮತ್ತು ಲೆಕ್ಕ~~ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2. ಮಾನ್ಯ ಉಪ ಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಚಿಕ್ಕಮಗಳೂರು ಜಿಲ್ಲೆ.
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ,
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.